ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

ಅ) ನಗರ ಪ್ರದೇಶಗಳಲ್ಲಿ ಅಭಿವೃದ್ಧಿ ತೆರಿಗೆ ವಸೂಲಿ ಮಾಡುವ ಬಗ್ಗೆ ನಗರಸಭೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರ ನಡುವೆ ಜಿಜ್ಞಾಸೆ ಇದ್ದು ನಗರಸಭೆ ಅಭಿವೃದ್ಧಿ ಶುಲ್ಕ ವಸೂಲಿ ಮಾಡಲು, ಕಾನೂನು ತೊಡಕು ಇರುವುದನ್ನು ನಿವಾರಿಸಿ, ಪರಿಹಾರ ವ್ಯವಸ್ಥೆ ಮಾಡಲು ಈ ಹಿಂದೆ ಸರ್ಕಾರವು ಆಶ್ವಾಸನೆ ನೀಡಿತ್ತೇ?

ಆ) ಹಾಗಿದ್ದಲ್ಲಿ, ಇದನ್ನೂ ಸಹ ಕಾರ್ಯಗತವಾಗದಿರಲು ಕಾರಣವೇನು?

ಇ) ಈ ಕಾನೂನು ತೊಡಕನ್ನು ಪರಿಹರಿಸುವ ದಿಶೆಯಲ್ಲಿ ಈವರೆಗೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

ಉತ್ತರ

ಅ) ಹೌದು

ಆ ಮತ್ತು ಇ) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮಕ್ಕೆ ಸೂಕ್ತ ತಿದ್ದುಪಡಿ ತರಲು ಸರ್ಕಾರ ಕಾರ್ಯೋನ್ಮುಖವಾಗಿದೆ. ಕರಡು ತಿದ್ದುಪಡಿಯನ್ನು ರೂಪಿಸಿ ಪರಿಶೀಲನೆಗಾಗಿ ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಇಲಾಖೆಗೆ ಕಳುಹಿಸಿಕೊಡಲಾಗಿತ್ತು. ಉದ್ದೇಶಿತ ತಿದ್ದುಪಡಿಯನ್ನು ಪುನರ್ ಪರಿಶೀಲಿಸುವಂತೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಅಭಿಪ್ರಾಯಿಸಿದೆ. ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಸೂಚಿಸಿರುವ ಪ್ರಕಾರ ಉದ್ದೇಶಿತ ತಿದ್ದುಪಡಿಯನ್ನು ಪುನರ್ ಪರಿಶೀಲಿಸಲು ಶೀಘ್ರ ಕ್ರಮ ಕೈಗೊಳ್ಳಲಾಗುತ್ತಿದೆ.

ನಗರಸಭೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರ ಅಭಿವೃದ್ಧಿ ಶುಲ್ಕ ತೆಗೆದುಕೊಳ್ಳದೇ ಇರುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 89(193)

ಸದಸ್ಯರ ಹೆಸರು: ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

ಅ) ಮಂಡ್ಯ ನಗರ ಸಭೆಯಾಗಲೀ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರವಾಗಲೀ ಅಥವಾ ಮಂಡ್ಯ ನಗರದಲ್ಲಿ ಅಭಿವೃದ್ಧಿ ತೆರಿಗೆ ವಸೂಲಿ ಮಾಡುವುದನ್ನು ಸರ್ಕಾರವು ತನ್ನ ಆದೇಶದ ಅನ್ವಯ ನಿರ್ಬಂಧಿಸಿದೆಯೆ;

ಆ) ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು;

ಇ) ಅಭಿವೃದ್ಧಿ ತೆರಿಗೆ, ಪಾವತಿಸಿಕೊಳ್ಳದೇ ಇರುವುದರಿಂದ, ಮಂಡ್ಯದಲ್ಲಿ ಮನೆಕಟ್ಟುವವರಿಗೆ ಲೈಸನ್ಸ್ ದೊರಕದೇ, ಸಾರ್ವಜನಿಕರಿಗೆ ತೊಂದರೆಯಾಗುತ್ತಾ ಇರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಸಾರ್ವಜನಿಕರ ತೊಂದರೆ ನಿವಾರಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಉತ್ತರ

ಅ) ಹೌದು. ಮಂಡ್ಯ ನಗರಸಭೆಗೆ ಅನ್ವಯಿಸುವಂತೆ ಮಾತ್ರ.

ಆ) ನಗರ ಪ್ರದೇಶಗಳಿಗಾಗಿ ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ರಚನೆ ಮಾಡುವ ಮೊದಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ೨ಐಐಐನೇ ಅಧ್ಯಾಯದ ಕಲಂ 170ರಡಿಯಲ್ಲಿ ಖಾಸಗಿ ಬಡಾವಣೆಗಳಿಗೆ ಮಂಜೂರಾತಿ ನೀಡುವ ಅಧಿಕಾರವನ್ನು ಪುರಸಭೆಗಳೇ ಹೊಂದಿದ್ದವು ಮತ್ತು ಅಭಿವೃದ್ಧಿ ಶುಲ್ಕವನ್ನು ವಸೂಲಿ ಮಾಡುತ್ತಿದ್ದವು. ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆಯು ಜಾರಿಗೆ ಬಂದ ನಂತರ ಸದರಿ ಕಾಯ್ದೆಯ ಕಲಂ 76(2)ರ ಸದ್ಗುಣದಡಿಯಲ್ಲಿ ಅಂತಹ ನಗರಸಭೆಗೆ ಅನ್ವಯಿಸುವುದಿಲ್ಲವೆಂದು ಅವಕಾಶ ಮಾಡಲಾಗಿರುತ್ತೆ.

ಇ ಮತ್ತು ಈ) ಸಾರ್ವಜನಿಕರಿಗೆ ಇದರಿಂದ ಆಗಿರುವ ಅನಾನುಕೂಲವನ್ನು ಬಗೆಹರಿಸಲು ಸಂಬಂಧಪಟ್ಟ ಅಧಿನಿಯಮಗಳಿಗೆ ತಿದ್ದುಪಡಿ ಮಾಡಲು ಸರ್ಕಾರ ಮುಂದಾಗಿದೆ.

ನಗರ ಹಾಗೂ ಗ್ರಾಮಗಳ ಅಭಿವೃದ್ಧಿಗೆ ಸಂವಿಧಾನ ತಿದ್ದುಪಡಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 90(209)